## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಳಗಾವಿ ಜಿಲ್ಲೆ, ಹುಕ್ಕೇರಿ ತಾಲ್ಲೂಕಿನ ಬಸ್ಸಾಪೂರ ಮತ್ತು ಇತರೆ 11 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆಯ Express Feeder Line ಕಾಮಗಾರಿಯ ಅಂದಾಜು ಮೊತ್ತ ರೂ.80.00ಲಕ್ಷಗಳಿಗೆ ಅನುಮೋದನೆ ನೀಡುವ ಕುರಿತು.

ಉಲ್ಲೇಖ:
1. ಸರ್ಕಾರದ ಆದೇಶ ಸಂ:ಗ್ರಾಅಪ 105 ಗ್ರಾನೀಸ(2)2007 ದಿನಾಂಕ:14.03.2008.
2. ಮುಖ್ಯ ಇಂಜಿನಿಯರ್, RDWSD ರವರ ಕಡತ ಸಂ:ಗ್ರಾಅಪ 770 ಗ್ರಾಕುನೀ&ನೈಇ 2016-17

-----

**ಪೀಠಿಕೆ:**

ಮೇಲೆ(1)ರಲ್ಲಿ ಓದಲಾದ ಆದೇಶದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾದ ರೂ.579.90ಲಕ್ಷ ಪರಿಷ್ಕೃತ ಅಂದಾಜು ಮೊತ್ತದ ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ಬಸ್ಸಾಪೂರ ಮತ್ತು ಇತರೆ 11 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯು ಪೂರ್ಣಗೊಂಡಿದೆ. ಯೋಜನೆಯ ಸುಗಮ ಕಾರ್ಯಾಚರಣೆಗಾಗಿ ನಿರಂತರ ವಿದ್ಯುತ್ ಸರಬರಾಜು ಸಲುವಾಗಿ Express Feeder Line ಅಗತ್ಯತೆಯಿದ್ದು, ಈ ಸಂಬಂಧದ ಅಂದಾಜು ವೆಚ್ಚ ರೂ.80.00ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ರವರು ಮೇಲೆ ಓದಲಾದ (2)ರ ಕಡತದಲ್ಲಿ ಕೋರಿರುತ್ತಾರೆ. 2016-17ರ ವಾರ್ಷಿಕ ಕ್ರಿಯಾ ಯೋಜನೆಯಲ್ಲಿ ಉದ್ದೇಶಿತ ಕಾಮಗಾರಿಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ. NRDWP -Coverage & Quality ಯಡಿ ಈ ಕಾಮಗಾರಿ ಕೈಗೊಳ್ಳಲು ಮಂಜೂರಾತಿ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂ: ಗ್ರಾಅಪ 32 ಗ್ರಾನೀಸ (5) 2018 ಬೆಂಗಳೂರು ದಿನಾಂಕ: 07.08.2018**

ಪೀಠಿಕೆಯಲ್ಲಿನ ಅಂಶಗಳನ್ನು ಪರಿಶೀಲಿಸಲಾಗಿ, ಬೆಳಗಾವಿ ಜಿಲ್ಲೆ, ಹುಕ್ಕೇರಿ ತಾಲ್ಲೂಕಿನ ಬಸ್ಸಾಪೂರ ಮತ್ತು ಇತರೆ 11 ಗ್ರಾಮಗಳ ಕುಡಿಯುವ ನೀರು ಪೂರೈಕೆ ಯೋಜನೆಗೆ ಎಕ್ಸ್‌ಪ್ರೆಸ್ ಫೀಡರ್ ಲೈನ್ ಕಾಮಗಾರಿಯನ್ನು **ರೂ.80.00ಲಕ್ಷ (ಎಂಭತ್ತು ಲಕ್ಷ ರೂಪಾಯಿಗಳು ಮಾತ್ರ)** ಗಳ ಅಂದಾಜು ಮೊತ್ತದಲ್ಲಿ NRDWP ಕಾರ್ಯಕ್ರಮದಡಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. ಉದ್ದೇಶಿತ ಕಾಮಗಾರಿಯನ್ನು 2018-19ನೇ ಸಾಲಿನ NRDWP ವಾರ್ಷಿಕ ಕ್ರಿಯಾ ಯೋಜನೆಯಲ್ಲಿ ಅಳವಡಿಸತಕ್ಕದ್ದು.

3. ಈ ಆದೇಶದಲ್ಲಿ ಮಂಜೂರಾಗಿರುವ ಕಾಮಗಾರಿಯ ಅಂದಾಜು ವೆಚ್ಚದಲ್ಲಿ ಯಾವುದೇ ಹೆಚ್ಚಳಕ್ಕೆ ಆಸ್ಪದ ನೀಡದಂತೆ, ನಿಗದಿತ ಅವಧಿಯೊಳಗೆ ಕಾಮಗಾರಿ ಪೂರ್ಣಗೊಳಿಸಿ ಸದರಿ ಯೋಜನಾ ವ್ಯಾಪ್ತಿಯ ಗ್ರಾಮಗಳಿಗೆ ನಿರಂತರ ನೀರು ಪೂರೈಕೆಯಾಗತಕ್ಕದ್ದು.

4. ಈ ಆದೇಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರು ರವರು ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ ಆದೇಶ ಸಂಖ್ಯೆ:ಗ್ರಾಅಪ 154 ಎಫ್ಎನ್ 2018, ದಿನಾಂಕ:31.07.2018ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಸರ್ಕಾರದ ಉಪಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಪ್ರತಿಗಳು :**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು– II – E&RSA-) ಕರ್ನಾಟಕ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
5. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಬೆಳಗಾಂ.**
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ / ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯತ್, **ಬೆಳಗಾಂ.**
7. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, ಕಾವೇರಿಭವನ, ಬೆಂಗಳೂರು–09.
8. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, **ಬೆಳಗಾಂ.**
9. ಕಾರ್ಯಪಾಲಕ ಅಭಿಯಂತರರುಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, **ಚಿಕ್ಕೋಡಿ.**
10. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
11. ಮುಖ್ಯ ಲೆಕ್ಕಾಧಿಕಾರಿ, RDWSD, ಕಾವೇರಿಭವನ, ಬೆಂಗಳೂರು–09.
12. ವಿಶೇಷಾಧಿಕಾರಿ (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
13. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
14. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
15. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
16. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿ.
17. ಆಯುಕ್ತರು, RDWSD ಮತ್ತು ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ / ಆಂತರಿಕ ಆರ್ಥಿಕ ಸಲಹೆಗಾರರು ಇವರುಗಳ ಆಪ್ತ ಸಹಾಯಕರು.
18. ಉಪ ನಿರ್ದೇಶಕರು, Network Management Centre (TNMC), ನಂ.49, ಖನಿಜ ಭವನ, ರೇಸ್ ಕೋರ್ಸ ರಸ್ತೆ, ಬೆಂಗಳೂರು.
19. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, BWSSB ಬ್ರ್ಯಾಂಚ್, ರಾಜದ್ರೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು.
20. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
21. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂ.ರಾಜ್ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
22. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
23. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
24. ಶಾಖಾ ರಕ್ಷಾ ಕಡತ ಹೆಚ್ಚುವರಿ ಪ್ರತಿಗಳು.